**''Azadi Ka Amrit Mahotsav''**
**INDIA@75**

# ಕೃಷಿ ವಿಶ್ವ ವಿದ್ಯಾನಿಲಯ
# ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)
## ಜಿ.ಕೆ.ವಿ.ಕೆ., ಬೆಂಗಳೂರು–560065
## * ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ *

**ದಿನಾಂಕ:** 31.12.2021

## ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಸೀಮಿತವಾಗಿದೆ
### ಈ ವಾರದ ಹವಾಮಾನ ಮುನ್ಸೂಚನೆ(ಭಾರತೀಯ ಹವಾಮಾನ ಇಲಾಖೆ)
### (ದಿನಾಂಕ 01-01-2022 ರಿಂದ 05-01-2022 ವರೆಗೆ)

| ನಿಯತಾಂಕಗಳು | 01.01.2022 | 02.01.2022 | 03.01.2022 | 04.01.2022 | 05.01.2022 |
|---|---|---|---|---|---|
| ಮಳೆ (ಮಿ ಮಿ) | 1 | 1 | 1 | 0 | 0 |
| ಗರಿಷ್ಠ ಉಷ್ಣಾಂಶ (ಡಿ.ಸೆ. ) | 26 | 27 | 28 | 29 | 29 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 17 | 17 | 17 | 17 | 17 |
| ಮೋಡ (ಪ್ರಮಾಣ) | 5 | 5 | 5 | 2 | 2 |
| ಆರ್ದ್ರತೆ 7.20 ಬೆ (ಶೇ) | 85 | 85 | 85 | 82 | 82 |
| ಆರ್ದ್ರತೆ 2.20 ಮ (ಶೇ) | 67 | 67 | 65 | 65 | 65 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 5 | 5 | 5 | 2 | 2 |
| ಗಾಳಿಯ ದಿಕ್ಕು ( ಡಿಗ್ರಿ) | 68 | 68 | 72 | 103 | 103 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ತುಂತುರು ಮಳೆಯಾಗುವ ಸಾದ್ಯತೆ ಇದೆ. ದಿನದ ಗರಿಷ್ಠ ಉಷ್ಣಾಂಶ **26.0-29.0$^{o}$C** ಮತ್ತು ಕನಿಷ್ಠ **17.0$^{o}$C** ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ **82-85 %** ಇದ್ದು ಮಧ್ಯಾಹ್ನ **65-67 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **2-5** ಕಿ.ಮೀ. ವೇಗದಲ್ಲಿ ಬೀಸುವ ಸ0ಭವವಿದೆ.

### ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

| ಬೆಳೆಗಳು | ಬೆಳೆಯ ಹಂತ | ಕೃಷಿ ಸಲಹೆಗಳು |
|---|---|---|
| | | • ರೈತ ಬಾಂದವರು ಕಟಾವು ಮಾಡಿರುವ ಬೆಳೆಗಳನ್ನು ಸ್ವಚ್ಚ ಮಾಡಿ ಒಕ್ಕಣೆ ಮಾಡಿ, ಬಿಸಿಲಿನಲ್ಲಿ ಒಣಗಿಸಿ ಚೀಲದಲ್ಲಿ ಶೇಖರಿಸಿ.<br>• ಕಟಾವು ಮಾಡಿದ ಬಿತ್ತನೆ ಬೀಜಗಳನ್ನು ಸರಿಯಾಗಿ ಒಣಗಿಸಬೇಕು. ಅಂದರೆ ಏಕದಳ ದಾನ್ಯಗಳು ತೇವಾಂಶ ಶೇ. 11 ರಿಂದ 12, ದ್ವಿದಳದಾನ್ಯಗಳ ತೇವಾಂಶ ಶೇ.9, ಎಣ್ಣೆಕಾಳುಗಳು ಶೇ.8 ಮತ್ತು ತರಕಾರಿ ಬೀಜಗಳು ಶೇ 5 ರಿಂದ 6 ರಷ್ಟಿರಬೇಕು. ಇದರಿಂದ ಹೆಚ್ಚುದಿನ ಕೆಡದಂತೆ ಬೀಜಗಳನ್ನು ಸಂಸ್ಕರಣೆ ಮಾಡಬಹುದು ಜೊತೆಗೆ ಉಗ್ರಾಣ ಕೀಟದ ಬಾಧೆಯನ್ನು ಕಡಿಮೆಮಾಡಬಹುದು.<br>• ದ್ವಿದಳದಾನ್ಯಗಳನ್ನು ಸಂಸ್ಕರಣಾ ಕೀಟಗಳಿಂದ ರಕ್ಷಿಸಲು ಎಣ್ಣೆಯ ಲೇಪನಮಾಡಿ ಸಂಗ್ರಹಿಸಬೇಕು (ಔಡಲ, ಅಗಸಿ, ಹೊಂಗೆ ಅಥವಾ ಬೇವಿನ ಎಣ್ಣೆ) ಪ್ರತಿ ಕೆ.ಗ್ರಾಂ ಬೀಜಕ್ಕೆ 3 ರಿಂದ 5 ಮಿ.ಲೀ. ಎಣ್ಣೆಯನ್ನು ಉಪಯೋಗಿಸಬೇಕು. |
| ತೊಗರಿ | ಕಟಾವು | 1. ಚೆನ್ನಾಗಿ ಬಲಿತಿರುವ ತೊಗರಿ ಕಾಳುಗಳನ್ನು ಕುಡುಗೋಲಿನಿಂದ ಕಟಾವು ಮಾಡಬಹುದು ಕಟಾವು ಮಾಡಿರುವ ಬೆಳೆಯನ್ನು ಬಿಸಿಲಿನಲ್ಲಿ ಚೆನ್ನಾಗಿ ಒಣಗಿಸಿ ಒಕ್ಕಣೆ ಮಾಡಿ ಗೋಣಿ ಚೀಲದಲ್ಲಿ ಶೇಖರಿಸಿ |
| ರಾಗಿ | ಕಟಾವು | 1. ಕಟಾವಿಗೆ ಬಂದಿರುವ ರಾಗಿ ತೆನೆಗಳನ್ನು ಕುಡುಗೋಲಿನಿಂದ ಕಟಾವು ಮಾಡಬಹುದು<br>2. ಗಿಡವು ನೆಲಕ್ಕೆ ಬಿದ್ದಿಲ್ಲವಾದಲ್ಲಿ ರಾಗಿ ಕಟಾವು ಮಾಡುವ ಯಂತ್ರದಿಂದ ಕಟಾವು ಮಾಡಬಹುದು<br>3. ಕಟಾವು ಮಾಡಿರುವ ಬೆಳೆಯನ್ನು ಬಿಸಿಲಿನಲ್ಲಿ ಚೆನ್ನಾಗಿ ಒಣಗಿಸಿ ಗೋಣಿ ಚೀಲದಲ್ಲಿ ಶೇಖರಿಸಿ |
| ಮೆಕ್ಕೆಜೋಳ | ಕಟಾವು | 1. ಕಟಾವು ಮಾಡಿರುವ ತೆನೆಯನ್ನು ಬಿಸಿಲಿನಲ್ಲಿ ಚೆನ್ನಾಗಿ ಒಣಗಿಸಿ |
| ಮಾವು | ಹೂವಿನ ಕುಡಿ ಚಿಗುರುವ ಮತ್ತು ಹೂವಿನ ಹಂತ | 1. ಕನಿಷ್ಠ ಉಷ್ಣಾಂಶವು 3–4 $^{o}$C ಹಠಾತ್ ಕುಸಿತದಿಂದ ಮಾವಿನ ಹೂವಿನ ಮೇಲೆ ತುಂಬಾ ಪರಿಣಾಮ ಬಿದ್ದು ಹೂವುಗಳು ಉದುರುವುದು ಸರ್ವೇ ಸಾಮಾನ್ಯವಾಗಿದೆ. ಇದರ ಹತೋಟಿಗೆ ಪ್ಯಾಕ್ಲೋಬ್ಯುಟಜಾಲ್ ಅನ್ನು ಸಿಂಪಡಿಸಿ ಇದರಿಂದ ಎಲೆ ಚಿಗುರುವುದು ನಿಲ್ಲುತ್ತದೆ ಮತ್ತೆ ಹೊಸ ಹೂವುಗಳು ಬಿಡಲು ಪ್ರಾರಂಭವಾಗುತ್ತವೆ.<br>2. ಹೂ ಬಿಡುವುದಕ್ಕೆ ಮುಂಚೆ ಹಾಗೂ ಕಾಯಿ ಕಚ್ಚಿದ ಕೂಡಲೇ ಜಿಗಿಹುಳು ಮತ್ತು ಬೂದಿರೋಗದ |

| | | |
|---|---|---|
| | | ನಿಯಂತ್ರಣಕ್ಕಾಗಿ ಗಿಡಗಳಿಗೆ 4ಗ್ರಾಂ ಕಾರ್ಬರಿಲ್ (50 wp) ಅಥವಾ 0.3 ಮಿ.ಲೀ ಇಮಿಡಾಕ್ಲೋಪ್ರಿಡ್ 200.ಎಸ್.ಎಲ್ ಅಥವಾ 0.5 ಮಿ.ಲೀ ಲ್ಯಾಂಬ್ಡಾ ಸೈಯೋಲೋಥ್ರಿನ್ (5 ಇಸಿ)<br>3. ಜೊತೆಗೆ 3ಗ್ರಾಂ. ನೀರಿನಲ್ಲಿ ಕರಗುವ ಗಂಧಕ (ಸಲ್ ಟಾಫ್ 80wp) ಪ್ರತಿ ಲೀಟರ್ ನೀರಿನಲ್ಲಿ ಮಿಶ್ರ ಮಾಡಿ ಸಿಂಪಡಿಸಿ.<br>4. ಜಿಗಿಹುಳುವಿನ ಹಾವಳಿ ತೀವ್ರವಾಗಿದ್ದಲ್ಲಿ ಅಝಾಡಿರೆಕ್ಟಿನ್ (10,000 ಪಿ.ಪಿ.ಎಮ್) 7 ಮಿ.ಲೀ/ಲೀ ನೀರಿನಲ್ಲಿ ಸಿಂಪಡಿಸಿ.<br>5. ಮಾವಿನ ಮರಗಳ ಬುಡದ ಪಾತಿಗಳನ್ನು ಸ್ವಚ್ಚಗೊಳಿಸಿ ಲಾಂಟಾನ ಮುಂತಾದ ಕಳೆ ಸಸ್ಯಗಳಿದ್ದರೆ ಬೇರು ಸಮೇತ ಕಿತ್ತುತೆಗೆಯಬೇಕು.<br>6. ಮಾವಿನ ಮರಗಳ ಬುಡದ ಪಾತಿಗಳನ್ನು ಸ್ವಚ್ಚಗೊಳಿಸಿ ಲಾಂಟಾನ ಮುಂತಾದ ಕಳೆ ಸಸ್ಯಗಳಿದ್ದರೆ ಬೇರು ಸಮೇತ ಕಿತ್ತುತೆಗೆಯಬೇಕು. |
| **ಪಶುಸಂಗೋಪನೆ** | | 1. ತಾಪಮಾನದಲ್ಲಿ ಹಠಾತ್ ಕುಸಿತದಿಂದ ಪ್ರಾಣಿಗಳನ್ನು ರಕ್ಷಿಸಲು ರಾತ್ರಿಯ ಸಮಯದಲ್ಲಿ ಮುಚ್ಚಿದ ಶೆಡ್ ಪ್ರದೇಶದಲ್ಲಿ ಇರಿಸಿ.<br>2. ಪ್ರಾಣಿಗಳ ಶೆಡ್‌ಗಳಲ್ಲಿನ ನೆಲ ಹಾಸು/ಹುಲ್ಲನ್ನು ಪ್ರತಿದಿನ ಬದಲಾಯಿಸಬೇಕು.<br>3. ಕೆಲವು ಪ್ರದೇಶಗಳಲ್ಲಿ ಚಳಿಗಾಲದ ತಿಂಗಳುಗಳಲ್ಲಿ ಉಂಟಾಗುವ ಕೊರತೆಯ ಅವಧಿಗೆ ಮೇವನ್ನು ಸಂಗ್ರಹಿಸಲು ಸರಿಯಾದ ಕಾಳಜಿ ವಹಿಸಬೇಕು, ಈ ಸಮಯದಲ್ಲಿ ದೀರ್ಘಕಾಲಿಕ ಹುಲ್ಲುಗಳನ್ನು ಕತ್ತರಿಸಬೇಕು. |
| **ಕೋಳಿ ಸಾಕಾಣಿಕಾ** | | 1. ಮೊಟ್ಟೆಯಿಂದ ಮರಿಗಳ ಬಂದ ನಂತರ ಮೊದಲನೇ ವಾರದಲ್ಲಿ ಶಾಖದ ಬುಟ್ಟಿಯ ಕೆಳಗೆ ಬಿಡಬೇಕು ಮತ್ತು ಶಾಖದ ಬುಟ್ಟಿಯ ಅಂಚಿನಲ್ಲಿ ನೆಲಕ್ಕೆ ಹರಡಿರುವ ಸತ್ತೆಯಿಂದ 8 ಸೆ.ಮೀ. ಮೇಲೆ $35^0$ ಸೆ. ಶಾಖ ಇರಬೇಕಾಗುತ್ತದೆ. ಅನಂತರ ವಾರಕ್ಕೆ $2^0$ ಸೆ. ನಂತೆ ಕಡಿಮೆ ಮಾಡಿ, ನಾಲ್ಕು ವಾರಗಳ ನಂತರ ಬಿಸಿ ಬುಟ್ಟಿಗಳನ್ನು ತೆಗೆಯಬೇಕು.<br>2. ಚಳಿಗಾಲವಿರುವುದರಿಂದ ಕೋಳಿ ಸಾಕಾಣಿಕಾ ಕೊಠಡಿಯಲ್ಲಿ ಉಷ್ಣಾಂಶದ ಸ್ಥಿರತೆ ಕಾಪಾಡಲು ವಿದ್ಯುತ್ ಬಲ್ಬ್ ಗಳ ಮುಖಾಂತರ ಸ್ಥಿರತೆಯನ್ನು ಕಾಪಾಡುತ್ತದೆ.<br>3. ಕೋಳಿ ಸಾಕಾಣಿಕಾ ಕೊಠಡಿಯಲ್ಲಿ ಕಿಟಕಿಯಲ್ಲಿ ಚಳಿಗಾಳಿಯು ಹೆಚ್ಚಾಗಿ ಬೀಸುವುದರಿಂದ ಪರದೆಯನ್ನು ಮುಚ್ಚಿ ಚಳಿಯಿಂದ ರಕ್ಷಿಸಬೇಕು. |
| **ರೇಷ್ಮೆ ಸಾಕಾಣಿಕೆ** | | 1. **ಸುಣ್ಣ ಕಟ್ಟು ರೋಗ:** ಈ ರೋಗವು ಸಾಮಾನ್ಯವಾಗಿ ಮಳೆಗಾಲ ಮತ್ತು ಚಳಿಗಾಲದಲ್ಲಿ ಕೆಲವು ಶಿಲೀಂಧ್ರಗಳ ಸೋಂಕಿನಿಂದ (ಬ್ಯುವೇರಿಯಾ ಬ್ಯಾಸಿಯಾನಾ) ಬರುತ್ತದೆ.<br>**2.** ರೋಗವನ್ನು ಯಶಸ್ವಿಯಾಗಿ ನಿಯಂತ್ರಿಸಬೇಕಾದರೆ ಉಷ್ಣಾಂಶ ಮತ್ತು ತೇವಾಂಶವನ್ನು ಶಿಫಾರಸ್ಸು ಮಾಡಿದ ರೀತಿಯಲ್ಲಿ ಕಾಪಾಡಬೇಕು.<br>**3.** ರೇಷ್ಮೆ ಸಾಕಾಣಿಕಾ ಘಟಕದಲ್ಲಿ ಕನಿಷ್ಠ ಉಷ್ಣಾಂಶವು $22^0$ ಸೆ. ಗಿಂತ ಕಡಿಮೆಯಾದಲ್ಲಿ ರೂಮ್ ಹೀಟರ್‌ಗಳ ಮುಖಾಂತರ ಸ್ಥಿರತೆಯನ್ನು ಕಾಪಾಡುವ್ಯದು ಅವಶ್ಯಕ.<br>**4.** ಹಾಸಿಗೆಯನ್ನು ತೆಳುವಾಗಿಟ್ಟು ಹಳೆ ಹಾಸಿಗೆ ಒಣಗುವಂತೆ ಸುಣ್ಣವನ್ನು ಹಂತಕ್ಕೆ ತಕ್ಕಂತೆ ಸರಿ ಪ್ರಮಾಣದಲ್ಲಿ ಧೂಳೀಕರಿಸಿ ನೋಡಿಕೊಳ್ಳಬೇಕು.<br>**5.** ಬಲೆಯನ್ನು ಬಳಸಿ ಹಾಸಿಗೆಯನ್ನು ಸ್ವಚ್ಚಗೊಳಿಸಬೇಕು ಮತ್ತು ರೋಗಗ್ರಸ್ಥ ಹುಳುಗಳನ್ನು ಆಯ್ದು ಮಣ್ಣಿನಲ್ಲಿ ಹೂತು ಹಾಕಿ ನಾಶಪಡಿಸಬೇಕು. ಸಾಕಾಣಿಕೆ ಮನೆ ಮತ್ತು ಅದರ ಸುತ್ತಲೂ ಶೇ.5ರ ಬ್ಲೀಚಿಂಗ್ ಪುಡಿ ಮತ್ತು ಸುಣ್ಣದ ಮಿಶ್ರಣವನ್ನು (1:19) ಧೂಳೀಕರಿಸಬೇಕು ಹಾಗೂ ವೈಯಕ್ತಿಕ ಶುಭ್ರತೆಯನ್ನು ಕಾಪಾಡಬೇಕು.<br>6. ಕಾಲಕಾಲಕ್ಕೆ ಹಾಸಿಗೆ ಸೋಂಕು ನಿವಾರಕಗಳಾದ ಸುರಕ್ಷ, ವಿಜೇತ, ಅಂಕುಶ್, ಸಂರಕ್ಷಕ ಮುಂತಾದ ಔಷಧಿಗಳನ್ನು ಶಿಫಾರಸ್ಸು ಮಾಡಿದ ಪ್ರಮಾಣದಲ್ಲಿ ಧೂಳೀಕರಿಸುತ್ತಿರಬೇಕು ಮತ್ತು ರೋಗ ಕಾಣಿಸಿಕೊಂಡಾಗ ಹತೋಟಿ ಬರುವವರೆಗೂ ಶಿಫಾರಸ್ಸು ಮಾಡಿದ ಪ್ರಮಾಣದಲ್ಲಿ ಸೋಂಕು ನಿವಾರಕಗಳನ್ನು ಬಳಸಬೇಕು. |


**ನೋಡಲ್ ಅಧಿಕಾರಿ:**

ಕೃಷಿ ಹವಾಮಾನ ವಿಭಾಗ

**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**


**ಮೊಬೈಲ್ ಆಫ್:**

- ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗೆ *mausam.imd.gov.in* ಜಾಲತಾಣದಲ್ಲಿ ಮಾಹಿತಿ ಪಡೆಯಿರಿ.